ಕರ್ನಾಟಕ ಸರ್ಕಾರ

# ರೈತರ ಬೆಳೆ ಸಾಲ ಮನ್ನಾ ಮಾದರಿಯಲ್ಲೇ ನೇಕಾರರಿಗೂ 50,000 ರೂ ವರೆಗೆ ಸಾಲ ಮನ್ನಾ : ಮುಖ್ಯಮಂತ್ರಿ ಘೋಷಣೆ



ಬೆಂಗಳೂರು, ನವೆಂಬರ್ 7:

ರೈತರಿಗೆ ಬೆಳೆ ಸಾಲ ಮನ್ನಾ ಮಾಡಿದ ಮಾದರಿಯಲ್ಲೇ, ನೇಕಾರರಿಗೂ 50,000 ರೂ ವರೆಗಿನ ಸಾಲ ಮನ್ನಾ ಮಾಡುವ ಮಹತ್ವದ ತೀರ್ಮಾನವನ್ನು ರಾಜ್ಯ ಸರ್ಕಾರ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಘೋಷಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪ್ರಾದೇಶಿಕ ಆಯುಕ್ತರು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಸಮ್ಮೇಳನದ ನಂತರ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಸರ್ಕಾರದ ಈ ತೀರ್ಮಾನದಿಂದ ಒಂಭತ್ತು ಸಾವಿರಕ್ಕೂ ಹೆಚ್ಚು ನೇಕಾರರಿಗೆ ಲಾಭವಾಗಲಿದೆ. ಇದರಿಂದ ರಾಜ್ಯ ಬೊಕ್ಕಸಕ್ಕೆ 52 ಕೋಟಿ ರೂ ಹೊರೆ ಬೀಳಲಿದೆ ಎಂದು ಸಿದ್ದರಾಮಯ್ಯ ಅವರು ಹೇಳಿದರು.

ಎಲ್ಲಾ ಜಿಲ್ಲೆಗಳಿಗೂ ಸುವಾಸಿತ ಹಾಲು

ಕ್ಷೀರಭಾಗ್ಯ ಯೋಜನೆಯಲ್ಲಿ ಮೈಸೂರು ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ವಿತರಿಸುತ್ತಿರುವ ಚಾಕೋಲೇಟ್ ಹಾಗೂ ಏಲಕ್ಕಿ ಸ್ವಾದದ ಸುವಾಸಿತ ಹಾಲು ಕುರಿತ

ಮಕ್ಕಳ ಅಭಿಪ್ರಾಯ ಪಡೆದು ಮುಂದೆ ವಾರಕ್ಕೆ ಐದು ದಿನ ವಿತರಿಸುತ್ತಿರುವ ಈ ಯೋಜನೆಯನ್ನು ಇತರೆ ಜಿಲ್ಲೆಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರಕ್ಕೆ ಇದೆ ಎಂದರು.

**ಇನ್‌ಪುಟ್ ಸಬ್ಸಿಡಿ**

ಕಳೆದ 2016–17 ನೇ ಸಾಲಿನಲ್ಲಿ ಇನ್‌ಪುಟ್ ಸಬ್ಸಿಡಿ ಮೊತ್ತವನ್ನು ರೈತರ ಖಾತೆಗಳಿಗೆ ತಲುಪಿಸುವಲ್ಲಿ ಶೇಕಡಾ 99 ರಷ್ಟು ಗುರಿ ಸಾಧಿಸಲಾಗಿದೆ. ವಿಳಾಸದಲ್ಲಿ ಲೋಪ, ಖಾತೆಯಲ್ಲಿ ದೋಷದಂತಹ ಉಳಿಕೆ ಶೇಕಡಾ ಒಂದರಷ್ಟು ಪ್ರಕರಣಗಳತ್ತ ಗಮನಹರಿಸಿ ನವೆಂಬರ್ ಅಂತ್ಯದೊಳಗೆ ರೈತರ ಖಾತೆಗಳಿಗೆ ನೇರವಾಗಿ ತಲುಪಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಬೆಳೆ ಕಟಾವು ಪ್ರಯೋಗಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಈ ಯೋಜನೆಯಲ್ಲಿ ಯಾವುದೇ ವೈಫಲ್ಯಕ್ಕೆ ಅವಕಾಶ ನೀಡಬಾರದು. ಪ್ರಸ್ತುತ ಶೇಕಡಾ 66 ರಷ್ಟು ಪ್ರಕರಣಗಳಲ್ಲಿ ಮಾತ್ರ ರೈತರಿಗೆ ವಿಮಾ ಸೌಲಭ್ಯ ದೊರೆತಿದೆ. ಉಳಿದ ಪ್ರಕರಣಗಳನ್ನು ಕೂಡಲೇ ಇತ್ಯರ್ಥ ಪಡಿಸಲು ಜಿಲ್ಲಾಧಿಕಾರಿಗಳು ಕಾರ್ಯೋನ್ಮುಖರಾಗಬೇಕು. ಅಂತೆಯೇ, ಇದಕ್ಕೆ ಸಂಬಂಧಿಸಿದಂತೆ ವಿಮಾ ಕಂಪನಿಗಳು ಎತ್ತಿರುವ ಆಕ್ಷೇಪಗಳನ್ನು ಪರಿಹರಿಸಲು ಅಭಿವೃದ್ಧಿ ಆಯುಕ್ತರು ಸಭೆ ನಡೆಸಿ ಬಗೆಹರಿಸಲು ತಿಳಿಸಲಾಗಿದೆ.

**ಬೆಳೆ ಸಮೀಕ್ಷೆ : ರೈತರಿಂದಲೇ ಮಾಹಿತಿ**

ರಾಜ್ಯದಲ್ಲಿ ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಪಶು ಸಂಗೋಪನಾ ಇಲಾಖೆಯ ಸಹಯೋಗದೊಂದಿಗೆ ಕಂದಾಯ ಇಲಾಖೆ ನವೆಂಬರ್ 11 ರ ವರೆಗೆ ಬೆಳೆ ಸಮೀಕ್ಷೆಯನ್ನು ಸಮರೋಪಾದಿಯಲ್ಲಿ ನಡೆಸಲಿದೆ. ಪ್ರಸ್ತುತ ಶೇಕಡಾ 51 ರಷ್ಟು ಪ್ರಗತಿ ಕಂಡಿರುವ ಈ ಯೋಜನೆಯನ್ನು ನಂತರ ರೈತರೇ ಸ್ವತಃ ಮಾಹಿತಿ ಒದಗಿಸುವುದರೊಂದಿಗೆ ಪೂರ್ಣಗೊಳಿಸಬೇಕಾಗುತ್ತದೆ ಎಂದರು. ನೆರೆ ರಾಜ್ಯಗಳಲ್ಲಿ ಡ್ರೋಣ್ ಕ್ಯಾಮರಾ ನೆರವಿನೊಂದಿಗೆ ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂಬ ಮಾಧ್ಯಮ ಮಿತ್ರರೊಬ್ಬರ ಸಲಹೆಗೆ ಸ್ಪಂದಿಸಿದ ಸಿದ್ದರಾಮಯ್ಯ ಅವರು ತಮ್ಮ ಸಲಹೆಯನ್ನು ಸಕಾರಾತ್ಮಕವಾಗಿ ಸ್ವೀಕರಿಸುತ್ತೇವೆ ಎಂದು ಹೇಳಿದರು.

**ಎಲ್ಲೂ ಕುಡಿಯುವ ನೀರಿನ ಹಾಹಾಕಾರ ಇಲ್ಲ**

ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ 400 ಕೋಟಿ ರೂ ಬಿಡುಗಡೆ ಮಾಡಲಾಗಿದೆ. ಈವರೆಗೆ 320 ಕೋಟಿ ರೂ ವೆಚ್ಚವಾಗಿದೆ. ಶಾಸಕರ ಕಾರ್ಯಪಡೆ,

ಕಂದಾಯ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆ ಅನುಷ್ಠಾನಗೊಳಿಸುತ್ತಿರುವ ಈ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿದೆ. ನಗರಾಭಿವೃದ್ಧಿ ಇಲಾಖೆಗೆ ಬಿಡುಗಡೆ ಮಾಡಿರುವ 110 ಕೋಟಿ ರೂ ಗಳ ಪೈಕಿ 59 ಕೋಟಿ ರೂ ವೆಚ್ಚವಾಗಿದೆ. ಉಳಿಕೆ ಮೊತ್ತದ ಸದ್ಬಳಕೆಗೆ ರೂಪು–ರೇಷೆ ಸಿದ್ಧಗೊಳ್ಳುತ್ತಿದೆ. ರಾಜ್ಯದಲ್ಲಿ ಮಳೆಯಾಗುವ ಮುನ್ನ ಅಂದರೆ ಆಗಸ್ಟ್ 14 ರ ಮುನ್ನ, 2000 ಟ್ಯಾಂಕರ್‌ಗಳಲ್ಲಿ ನೀರು ಪೂರೈಕೆ ಮಾಡಲಾಗುತ್ತಿತ್ತು. ಇದೀಗ 87 ಟ್ಯಾಂಕರ್‌ಗಳಲ್ಲಿ ಮಾತ್ರ ನೀರು ಸರಬರಾಜು ಮಾಡಲಾಗುತ್ತಿದೆ. ಇದು ರಾಜ್ಯದಲ್ಲಿ ಎಲ್ಲಿಯೂ ಕುಡಿಯುವ ನೀರಿನ ಹಾಹಾಕಾರ ಇಲ್ಲ ಎಂಬುದನ್ನು ಸೂಚಿಸುತ್ತದೆ ಎಂದು ಮುಖ್ಯಮಂತ್ರಿ ಬಣ್ಣಿಸಿದರು.

**ಉದ್ಯೋಗ ಖಾತರಿ : ಗುರಿ ಮೀರಿ ಸಾಧನೆ ಸಾಧ್ಯತೆ**

ರಾಜ್ಯದಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಹತ್ತು ಕೋಟಿ ಮಾನವ ದಿನಗಳನ್ನು ಸೃಜಿಸಲು ಉದ್ದೇಶಿಸಲಾಗಿದೆ. ಅಕ್ಟೋಬರ್ ಮಾಸಾಂತ್ಯದ ವರೆಗೆ ಶೇಕಡಾ 56.83 ಪ್ರಗತಿಯನ್ನು ಕಂಡಿರುವ ಈ ಯೋಜನೆ ಈ ಸಾಲಿನಲ್ಲೂ ಗುರಿ ಮೀರಿ ಸಾಧನೆಯಾಗುವ ಎಲ್ಲಾ ಲಕ್ಷಣಗಳೂ ಹಾಗೂ ಎಲ್ಲಾ ಸಾಧ್ಯತೆಗಳೂ ಇವೆ. ಪ್ರಸಕ್ತ ಸಾಲಿನಲ್ಲಿ ಬಿಡುಗಡೆಯಾಗಿರುವ 4000 ಕೋಟಿ ರೂ ಮೊತ್ತದಲ್ಲಿ ಈವರೆಗೆ 2135 ಕೋಟಿ ರೂ ವೆಚ್ಚವಾಗಿದೆ. ಕೂಲಿಗೆ ಶೇಕಡಾ 60 ರಷ್ಟು ಮೊತ್ತ ಹಾಗೂ ಸಾಮಗ್ರಗಳಿಗೆ ಶೇಕಡಾ 40 ರಷ್ಟು ಮೊತ್ತ ಮೀಸಲಿರುವ ಈ ಯೋಜನೆಯಲ್ಲಿ ಶಾಲಾ ಗೋಡೆ ನಿರ್ಮಾಣ ಒಳಗೊಂಡಂತೆ ಸಂಪತ್ತು ಸೃಷ್ಟಿಯ ಎಲ್ಲಾ ಕಾಮಗಾರಿಗಳನ್ನೂ ಕೈಗೊಳ್ಳಲು ಅವಕಾಶವಿದೆ. ಆದಕಾರಣ, ಈ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಆದ್ಯತೆ ನೀಡಲು ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಸಿದ್ದರಾಮಯ್ಯ ಅವರು ತಿಳಿಸಿದರು.

**ಹೈದರಾಬಾದ್ ಕರ್ನಾಟಕ : ಮಾರ್ಚ್ ಒಳಗೆ ಕಾಮಗಾರಿಗಳ ಪೂರ್ಣಗೊಳಿಸಲು ಆದೇಶ**

ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿಗೆ 4500 ಕೋಟಿ ರೂ ಹಂಚಿಕೆ ಮಾಡಿ, 2100 ಕೋಟಿ ರೂ ಬಿಡುಗಡೆ ಮಾಡಲಾಗಿದೆ. ಇದೀಗ 2014–15, 2015–16 ಹಾಗೂ 2016–17 ನೇ ಸಾಲಿನ ಕಾಮಗಾರಿಗಳನ್ನು ಪ್ರಸಕ್ತ ಸಾಲಿನ ಡಿಸೆಂಬರ್ ಒಳಗೆ ಹಾಗೂ ಪ್ರಸಕ್ತ ಸಾಲಿನ ಕಾಮಗಾರಿಗಳನ್ನು ಮುಂದಿನ 2018 ರ ಮಾರ್ಚ್ ಒಳಗೆ ಪೂರ್ಣಗೊಳಿಸಲು ಆದೇಶಿಸಲಾಗಿದೆ ಎಂದರು.

## ಕಂದಾಯ ಗ್ರಾಮ : ಪ್ರಸ್ತಾವನೆ ಬಂದೊಡನೆಯೇ ಅಧಿಸೂಚನೆ

ರಾಜ್ಯದಲ್ಲಿ ಕಂದಾಯ ಗ್ರಾಮಗಳ ಘೋಷಣೆಗಾಗಿ 790 ಪ್ರಸ್ತಾವನೆಗಳು ಬರಬೇಕಿದೆ. ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಬಂದೊಡನೆಯೇ ಸರ್ಕಾರ ಈ ನಿಟ್ಟಿನಲ್ಲಿ ಅಧಿಸೂಚನೆ ಹೊರಡಿಸಲಿದೆ.

## ರೈತರ ಆತ್ಮಹತ್ಯೆ : 15 ದಿನಗಳೊಳಗೆ ಪರಿಹಾರ ಇತ್ಯರ್ಥಕ್ಕೆ ಸೂಚನೆ

ಕಂದಾಯ ಇಲಾಖೆಯ ಅಧಿಕಾರಿಗಳು ಅರಣ್ಯ ಇಲಾಖೆಯ ಅಧಿಕಾರಿಗಳೊಡನೆ ಸಮನ್ವಯ ಸಾಧಿಸಿ ಅರಣ್ಯ ಹಕ್ಕು ಕಾಯಿದೆಯ ಅನುಷ್ಠಾನಕ್ಕೆ ಮುಂದಾಗುವಂತೆ ಸೂಚಿಸಲಾಗಿದೆ. ರೈತರ ಆತ್ಮಹತ್ಯೆ ಕುರಿತಂತೆ ಬಾಕಿ ಇರುವ ಪರಿಹಾರ ವಿತರಣೆಯ 104 ಅರ್ಜಿಗಳನ್ನು ಇನ್ನು 15 ದಿನಗಳೊಳಗೆ ಇತ್ಯರ್ಥಪಡಿಸಲು ಜಿಲ್ಲಾಧಿಕಾರಿಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಲಾಗಿದೆ.

## ಸರ್ವೇಯರ್‌ಗಳಿಗೆ ಗುರಿ

ರಾಜ್ಯವನ್ನು ಪೋಡಿ-ಮುಕ್ತ ಮಾಡಲು ಅನುವಾಗುವಂತೆ ಪ್ರತಿ ಸರ್ವೇಕ್ಷಣಾಕಾರರಿಗೆ ಪ್ರತಿ ತಿಂಗಳಿಗೆ 30 ಪೋಡಿ ಪ್ರಕರಣಗಳನ್ನು ಪೂರ್ಣಗೊಳಿಸುವಂತೆ ಗುರಿ ನಿಗದಿಪಡಿಸಲಾಗಿದೆ.

## ಸರ್ಕಾರಿ ಸ್ವತ್ತಿನ ಬಗ್ಗೆ ಪ್ರದರ್ಶನಾ ಫಲಕದಲ್ಲಿ ಪ್ರಕಟಿಸಿ

ಜಿಲ್ಲೆಯಲ್ಲಿ ಹಾಗೂ ತಾಲ್ಲೂಕಿನಲ್ಲಿ ಸರ್ಕಾರಿ ಭೂಮಿ ಎಷ್ಟಿದೆ ? ಖರಾಬು ಜಮೀನು ಎಲ್ಲಿದೆ ? ಕೆರೆ-ಕುಂಟೆಗಳ ವಿಸ್ತೀರ್ಣ ವಿವರಗಳೇನು ? ಗುಂಡು ತೋಪು, ನೆಡು ತೋಪು ಎಲ್ಲೆಲ್ಲಿದೆ ? ರಸ್ತೆಗಳ ಉದ್ದಗಲದ ವಿವರಗಳು ಹೀಗೆ ಸರ್ಕಾರಿ ಸ್ವತ್ತಿನ ವಿವರಗಳನ್ನು ಗ್ರಾಮ ಮಟ್ಟದಿಂದ ಹಿಡಿದು ಜಿಲ್ಲಾ ಮಟ್ಟದವರೆಗೂ ಪ್ರದರ್ಶನಾ ಫಲಕದಲ್ಲಿ ಪ್ರಕಟಿಸಿ. ಇದರಿಂದ ಸರ್ಕಾರಿ ಆಸ್ತಿ ಒತ್ತುವರಿಯಾಗುವುದನ್ನು ತಡೆಯಬಹುದು ಎಂದು ಎಲ್ಲಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಮುಖ್ಯಮಂತ್ರಿ ಮಾಹಿತಿ ನೀಡಿದರು.

## ಗಾಂಧಿ ಭವನಕ್ಕೆ ಸ್ಥಳ ಮಂಜೂರು

ಎಲ್ಲಾ ಜಿಲ್ಲೆಗಳಲ್ಲೂ ಗಾಂಧಿ ಭವನ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಈಗಾಗಲೇ ತಲಾ ಮೂರು ಕೋಟಿ ರೂ ಬಿಡುಗಡೆ ಮಾಡಿರುವ ಹಿನ್ನೆಲೆಯಲ್ಲಿ ಇನ್ನು ಒಂದು ತಿಂಗಳೊಳಗಾಗಿ ಸ್ಥಳ ಮಂಜೂರು ಮಾಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅನುಮೋದಿತ ವಿನ್ಯಾಸದಂತೆ

ನಿರ್ಮಿತಿ ಕೇಂದ್ರ ಅಥವಾ ಭೂ ಸೇನಾ ನಿಗಮದ ಮೂಲಕ ಕಾಮಗಾರಿಗಳನ್ನು ಪ್ರಾರಂಭಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

**ಬಹು ಗ್ರಾಮ ಕುಡಿಯುವ ನೀರು ಯೋಜನೆ : ಮಾರ್ಚ್ ಒಳಗೆ ಪೂರ್ಣಗೊಳಿಸಲು ಸೂಚನೆ**

ರಾಜ್ಯದಲ್ಲಿ ಪ್ರಸ್ತುತ ಚಾಲ್ತಿ ಇರುವ 65 ಬಹು ಗ್ರಾಮ ಕುಡಿಯುವ ನೀರು ಯೋಜನೆಗಳ ಕಾಮಗಾರಿಗಳನ್ನು ಮಾರ್ಚ್ ಒಳಗೆ ಪೂರ್ಣಗೊಳಿಸಲು ಸೂಚಿಸಲಾಗಿದೆ.

**ಶುದ್ಧ ಕುಡಿಯುವ ನೀರು ಘಟಕಗಳ ನಿರ್ವಹಣೆಗೆ ತಲಾ ಹತ್ತು ಲಕ್ಷ ರೂ ಬಿಡುಗಡೆ**

ಅಂತೆಯೇ, ರಾಜ್ಯದಲ್ಲಿ 11,500 ಶುದ್ಧ ಕುಡಿಯುವ ನೀರು ಘಟಕಗಳನ್ನು ಸ್ಥಾಪಿಸುವ ಗುರಿಗೆ ಪ್ರತಿಯಾಗಿ 10,227 ಪೂರ್ಣಗೊಂಡಿವೆ. ಅವುಗಳಲ್ಲಿ 10,092 ಘಟಕಗಳ ಸ್ಥಾಪನೆಯಾಗಿವೆ. ಉಳಿದವುಗಳನ್ನೂ ಮಾರ್ಚ ಒಳಗೆ ಪೂರ್ಣಗೊಳಿಸಲು ತಿಳಿಸಲಾಗಿದೆ. ಶುದ್ಧ ಕುಡಿಯುವ ನೀರು ಘಟಕಗಳ ನಿರ್ವಹಣೆಗೆ ಪ್ರತಿ ಜಿಲ್ಲಾ ಪಂಚಾಯತ್‌ಗೆ ತಲಾ ಹತ್ತು ಲಕ್ಷ ರೂ ಬಿಡುಗಡೆ ಮಾಡಲಾಗಿದೆ ಎಂದರು.

**ಮಾರ್ಚ್ 2018 ರೊಳಗೆ ರಾಜ್ಯ ಬಯಲು ಬಹಿರ್ದಸೆ ಮುಕ್ತ**

ಮಾರ್ಚ್ 2018 ರೊಳಗೆ ರಾಜ್ಯವನ್ನು ಬಯಲು ಬಹಿರ್ದಸೆ ಮುಕ್ತ ಮಾಡಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಆದೇಶಿಸಲಾಗಿದೆ.

ಸರ್ಕಾರ ನಿರೀಕ್ಷಿಸಿದ ಮಟ್ಟದಲ್ಲಿ ಕಾರ್ಯಗಳು ಜಾರಿ ಆಗಬೇಕು. ನಿವೇಶನ-ರಹಿತ ಹಾಗೂ ವಸತಿ-ರಹಿತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಬೇಡಿಕೆಯ ಮೇರೆಗೆ ಅರ್ಜಿ ಸಲ್ಲಿಸಿದಲ್ಲಿ ಮನೆ, ನಿವೇಶನ ಕೊಡುವುದಾಗಿ ಈಗಾಗಲೇ ಘೋಷಿಸಿದ್ದೇವೆ.

**ಗಂಗಾ ಕಲ್ಯಾಣ : ಫಲಾನುಭವಿಗಳ ಪಟ್ಟಿ ಆಧರಿಸಿ**

ಯಾವುದೇ ಶೇವಣಿಗಳ ಸಂದಾಯಕ್ಕೆ ಕಾಯದೆ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ ಫಲಾನುಭವಿಗಳ ಪಟ್ಟಿ ಸ್ವೀಕೃತವಾದೊಡನೆಯೇ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಲಾದ ಕೊಳವೆ ಬಾವಿಗಳಿಗೆ ವಿದ್ಯುದೀಕರಣ ಸಂಪರ್ಕ ಕಲ್ಪಿಸುವಂತೆ ಇಂಧನ ಇಲಾಖೆ ಆದೇಶಿಸಲಾಗಿದೆ. ಪ್ರಸಕ್ತ ಸಾಲಿನವರೆಗೆ ಕೊರೆಯಲಾದ 30,000 ಕೊಳವೆ ಬಾವಿಗಳ ಪೈಕಿ 18,949 ಕೊಳವೆ ಬಾವಿಗಳಿಗೆ ವಿದ್ಯುದೀಕರಣ ಬಾಕಿ ಇದೆ.

**2016–17 ಹಾಘೂ 2017–18 ನೇ ಸಾಲಿನ ಗುರಿಯಂತೆ ಇನ್ನೂ 34,000 ಹೊಸ ಕೊಳವೆ ಬಾವಿಗಳನ್ನು ಕೊರೆಸಿ, ಅವುಗಳಿಗೂ ವಿದ್ಯುತ್ ಸಂಪರ್ಕ ಕಲ್ಪಿಸಲು ಇಂಧನ ಇಲಾಖೆಗೆ ನಿರ್ದೇಶನ ನೀಡಲಾಗಿದೆ.**

## ಪರಿಶಿಷ್ಟ – ಹಿಂದುಳಿದ – ಅಲ್ಪಸಂಖ್ಯಾತರ ವಸತಿನಿಲಯ ಸನಿವಾಸ ಶಾಲೆಗಳಿಗೆ ನಿವೇಶನ

**ಪರಿಶಿಷ್ಟ ಮತ್ತು ಪರಿಶಿಷ್ಟ ವರ್ಗಗಳು, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ವಸತಿನಿಲಯ ಹಾಗೂ ಸನಿವಾಸ ಶಾಲೆಗಳಿಗೆ ಇನ್ನು ಒಂದು ತಿಂಗಳೊಳಗೆ ಸರ್ಕಾರಿ ಜಮೀನಿನಲ್ಲಿ ಅಥವಾ ಖಾಸಗಿಯವರಿಂದ ಭೂಮಿ ಖರೀದಿಸಿ ನಿವೇಶನ ಒದಗಿಸಲು ಸೂಚಿಸಲಾಗಿದೆ.**

## ಡಿಸೆಂಬರ್ 1 ರಿಂದ ಅನಿಲಭಾಗ್ಯ – ಜನವರಿ 1 ರಿಂದ ಇಂದಿರಾ ಕ್ಯಾಂಟೀನ್

**ಇಡೀ ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ಮುಖ್ಯಮಂತ್ರಿಯವರ ಅನಿಲ ಭಾಗ್ಯ ಯೋಜನೆಯಲ್ಲಿ ಬಡತನ ರೇಖೆಗಿಂತಲೂ ಕೆಳಗಿರುವ 30 ಲಕ್ಷ ಕುಟುಂಬಗಳಿಗೆ ತಲಾ 4,040 ರೂ ವೆಚ್ಚದಲ್ಲಿ ಒಂದು ಒಲೆ, ಒಂದು ಲೈಟರ್, ಒಂದು ಸಿಲಿಂಡರ್ ಹಾಗೂ ಎರಡು ರೀಫಿಲ್ ಉಚಿತವಾಗಿ ನೀಡುವ ಈ ಯೋಜನೆಯನ್ನು ಡಿಸೆಂಬರ್ 1 ರಿಂದ ಪ್ರಾರಂಭಿಸಲು, ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಜನವರಿ 1 ರಿಂದ ಇಂದಿರಾ ಕ್ಯಾಂಟೀನ್ ಪ್ರಾರಂಭಿಸಲು ಹಾಗೂ ಪ್ರಥಮ ವರ್ಷದ ವೈದ್ಯಕೀಯ, ಇಂಜಿನಿಯರಿಂಗ್ ಹಾಗೂ ಪದವಿಯಲ್ಲಿ ಸರ್ಕಾರಿ ಮಹಾವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ 1.5 ಲಕ್ಷ ಲ್ಯಾಪ್‌ಟಾಪ್ ನೀಡಲು ಕ್ರಮವಹಿಸಲು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.**

## ಗ್ರಾಮ ವಿಕಾಸ ಯೋಜನೆಗೆ 1000 ಕೋಟಿ ರೂ ಬಿಡುಗಡೆ

**ಮುಖ್ಯಮಂತ್ರಿಯವರ ಗ್ರಾಮ ವಿಕಾಸ ಯೋಜನೆಯಡಿ ರಾಜ್ಯದ 1000 ಗ್ರಾಮಗಳಿಗೆ ತಲಾ ಒಂದು ಕೋಟಿ ರೂ ನಂತೆ 1000 ಕೋಟಿ ರೂ ಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ. ಈ ನಿಟ್ಟಿನಲ್ಲಿ ಶೀಘ್ರ ಕಾಮಗಾರಿಗಳು ಪ್ರಾರಂಭಿಸಲು ಆದೇಶಿಸಲಾಗಿದೆ.**

## ಮಲೆನಾಡು ಜಿಲ್ಲೆಗಳಲ್ಲಿ ಸ್ತ್ರೀಶಕ್ತಿ ಗುಂಪುಗಳ ಮೂಲಕ ಮಾತೃಪೂರ್ಣ

ಮಲೆನಾಡು ಜಿಲ್ಲೆಗಳಲ್ಲಿ ಸ್ತ್ರೀಶಕ್ತಿ ಗುಂಪುಗಳ ಮೂಲಕ ಮಾತೃಪೂರ್ಣ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧಕ-ಬಾಧಕಗಳನ್ನು ಪರಿಶೀಲಿಸುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

## ಟಿಪ್ಪೂ ಜಯಂತಿ : ಹೆಸರು ಹಾಕುವುದು ಬೇಡ ಅಂದರೆ ಬೇಡ

ಟಿಪ್ಪೂ ಜಯಂತಿ ಸಮಾರಂಭದ ಆಮಂತ್ರಣ ಪತ್ರಿಕೆಯಲ್ಲಿ ಶಿಷ್ಠಾಚಾರದ ಪ್ರಕಾರ ಎಲ್ಲಾ ಜನಪ್ರತಿನಿಧಿಗಳ ಹೆಸರನ್ನು ನಮೂದಿಸಲು ಅವಕಾಶವಿದೆ. ಆದರೆ, ತಾವು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುವುದಿಲ್ಲ ಅಥವಾ ತಮ್ಮ ಹೆಸರನ್ನು ಆಮಂತ್ರಣ ಪತ್ರಿಕೆಯಲ್ಲಿ ನಮೂದಿಸುವುದು ಬೇಡ ಎಂದು ಜನಪ್ರತಿನಿಧಿಗಳು ಲಿಖಿತವಾಗಿ ತಿಳಿಸಿದಲ್ಲಿ, ಅಂತಹವರ ಹೆಸರನ್ನು ಮುದ್ರಿಸಬೇಡಿ ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಿದ್ದರಾಮಯ್ಯ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ಅಕ್ರಮ-ಸಕ್ರಮ ಯೋಜನೆ : ಮೂರು ತಿಂಗಳೊಳಗೆ ಎಲ್ಲಾ ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

ಬೆಂಗಳೂರು, ನವೆಂಬರ್ 7:

ಅಕ್ರಮ - ಸಕ್ರಮ ಯೋಜನೆಯಡಿ ಕರ್ನಾಟಕ ರಾಜ್ಯ ಭೂ ಕಂದಾಯ ಕಾಯಿದೆಯನ್ವಯ ಗ್ರಾಮೀಣ ಪ್ರದೇಶದಲ್ಲಿ ಪರಿಚ್ಛೇಧ 94 (ಸಿ) ನಂತೆ ಹಾಗೂ ನಗರ ಪ್ರದೇಶದಲ್ಲಿ ಪರಿಚ್ಛೇಧ 94 (ಸಿ) (ಸಿ) ನಂತೆ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಸಮಗ್ರವಾಗಿ ಪರಿಶೀಲಿಸಿ ಮುಂದಿನ ಮೂರು ತಿಂಗಳೊಳಗೆ ಎಲ್ಲಾ ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಅಧಿಕಾರಿಗಳಿಗೆ ಸೂಚಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪ್ರಾದೇಶಿಕ ಆಯುಕ್ತರು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಅದೇ ರೀತಿ, ಅರಣ್ಯ ಹಕ್ಕು ಸಮಿತಿಯ ಶಿಫಾರಸ್ಸಿನನ್ವಯ ಅರಣ್ಯ ವಾಸಿಗಳಿಗೂ ಸ್ವಾಧೀನ ಪತ್ರ ಕೊಡುವ ಕ್ರಮ ವೇಗವಾಗಿ ಆಗಬೇಕು ಪ್ರಸಕ್ತ ಆರ್ಥಿಕ ವರ್ಷದ ಏಳು ತಿಂಗಳು ಕಳೆದು

ಇನ್ನೂ ಐದು ತಿಂಗಳು ಉಳಿದಿದೆ. ಚುನಾವಣೆಗಳು ಸಮೀಪಿಸುತ್ತಿದ್ದರೂ, ಈ ಆರ್ಥಿಕ ವರ್ಷ ಪೂರ್ಣವಾಗಿ ಕಾರ್ಯ ನಿರ್ವಹಿಸಬಹುದಾಗಿದೆ. ಇನ್ನೂ ಬಾಕಿ ಇರುವ ಕಾರ್ಯಗಳನ್ನು ಕಳಕಳಿ, ಕಾಳಜಿ, ದಕ್ಷತೆ, ಪ್ರಾಮಾಣಿಕತೆ ಮತ್ತು ಪಾರದರ್ಶಕತೆಯಿಂದ ನಿರ್ವಹಿಸಿ ಪೂರ್ಣಗೊಳಿಸಿ ಜನರ ಮೆಚ್ಚುಗೆಗೆ ಪಾತ್ರರಾಗಿ ಎಂದು ಮುಖ್ಯಮಂತ್ರಿ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಸರ್ಕಾರ ನಿರೀಕ್ಷಿಸಿದ ಮಟ್ಟದಲ್ಲಿ ಕಾರ್ಯಗಳು ಜಾರಿ ಆಗಬೇಕು. ನಿವೇಶನ–ರಹಿತ ಹಾಗೂ ವಸತಿ–ರಹಿತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದಲ್ಲಿ ಮನೆ, ನಿವೇಶನ ಕೊಡುವುದಾಗಿ ಈಗಾಗಲೇ ಘೋಷಿಸಿದ್ದೇವೆ. ಜಿಲ್ಲಾ, ತಾಲ್ಲೂಕು ಹಾಗೂ ಪಂಚಾಯಿತಿ ಮಟ್ಟದಲ್ಲಿ ನಿವೇಶನ ಹಂಚಿಕೆಗೆ ಲಭ್ಯವಿರುವ ಭೂಮಿಯನ್ನು ಗುರುತಿಸದಿದ್ದರೆ ಸರ್ಕಾರದ ಸದುದ್ದೇಶ ಸಾಕಾರಗೊಳಸಲು ಸಾಧ್ಯವಿಲ್ಲ. ಆದಕಾರಣ ಈ ನಿಟ್ಟಿನಲ್ಲಿ ಈ ಕೂಡಲೇ ಕಾರ್ಯೋನ್ಮುಖರಾಗಿ ಎಂದು ಮುಖ್ಯಮಂತ್ರಿ ಆದೇಶಿಸಿದರು.

## ಒತ್ತುವರಿ ತೆರವಿಗೆ ಕ್ರಮ ಕೈಗೊಳ್ಳಿ

ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಎ. ಟಿ. ರಾಮಸ್ವಾಮಿ ವರದಿಯಲ್ಲಿ 34,111 ಎಕರೆ ಸರ್ಕಾರಿ ಭೂ ಒತ್ತುವರಿಯಾಗಿದೆ ಎಂದೂ ಹಾಗೂ ಅದರಲ್ಲಿ 7781 ಎಕರೆ ಭೂ ಒತ್ತುವರಿ ಸಾರ್ವಜನಿಕ ಉದ್ದೇಶಗಳಿಗೆ ಆಗಿದೆ ಎಂದೂ ವಿವರಗಳನ್ನು ನೀಡಿದ್ದಾರೆ. ಅಂತೆಯೇ, ಒತ್ತುವರಿಯಾಗಿರುವ 11,960 ಎಕರೆ ಸರ್ಕಾರಿ ಜಮೀನಿನಲ್ಲಿ 11,660 ಎಕರೆ ಸರ್ಕಾರಿ ಭೂಮಿಯನ್ನು ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ತೆರವುಗೊಳಿಸಿದ್ದಾರೆ. ಇದಲ್ಲದೆ, ವರದಿಯಲ್ಲಿ ನಮೂದಿತವಾಗದ ಸುಮಾರು 6000 ಎಕರೆ ಸರ್ಕಾರಿ ಭೂಮಿಯನ್ನೂ ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ತೆರವುಗೊಳಿಸಿದ್ದಾರೆ.

ಇದೇ ಮಾದರಿಯಲ್ಲಿ ವಿ ಬಾಲಸುಬ್ರಮಣ್ಯಂ ವರದಿಯಲ್ಲಿ ಉಲ್ಲೇಖಿಸಿರುವ ಅಂಶಗಳನ್ನು ಪರಿಶೀಲಿಸಿ ರಾಜ್ಯದ ಇತರೆಡೆಗಳಲ್ಲಿಯೂ ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳನ್ನು ಆಧ್ಯತೆಯ ಮೇರೆಗೆ ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಿ. ಇದರಿಂದ ರೈಲ್ವೆ, ರಸ್ತೆ, ಶಾಲಾ ಕಟ್ಟಡ ಹಾಗೂ ವಸತಿ ನಿಲಯಗಳಂತಹ ಸಾರ್ವಜನಿಕ ಹಿತದೃಷ್ಠಿ ಹೊತ್ತ ಸರ್ಕಾರದ ವಿವಿಧ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅಗತ್ಯವಿರುವ ಜಮೀನು ಹಂಚಿಕೆ ಮಾಡಲು ಸುಲಭವಾಗುತ್ತದೆ ಎಂದು ಸಿದ್ದರಾಮಯ್ಯ ಅವರು ತಿಳಿಸಿದರು.

ಮೊದಲು ಜಿಲ್ಲಾಧಿಕಾರಿಗಳೇ ನಿರ್ವಹಿಸುತ್ತಿದ್ದ ಹಲವು ಕಾರ್ಯಗಳು ಅಪರ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಹಂಚಿಕೆಯಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಮೇಲಿನ ಕಾರ್ಯ ಒತ್ತಡ ಗಣನೀಯವಾಗಿ ಕಡಿಮೆಯಾಗಿದೆ. ಸರ್ಕಾರಿ ಭೂಮಿ ಮಂಜೂರಾಗಿರುವ ಸಂಘ–ಸಂಸ್ಥೆಗಳ ಬಗ್ಗೆಯೂ ನಿಗಾ ಇಡಿ. ಸರ್ಕಾರದಿಂದ ಮಂಜೂರಾದ ಜಮೀನು ಅದೇ ಉದ್ದೇಶಕ್ಕೆ ಬಳಸಲಾಗಿದೆಯೇ ? ಇಲ್ಲವೇ ? ಎಂಬುದನ್ನು ಪರಿಶೀಲಿಸಿ. ಜಮೀನು ಹಾಗೂ ವಕ್ಫ್ ಆಸ್ತಿಗಳ ಒತ್ತುವರಿ, ರಸ್ತೆಗಳು ಹಾಗೂ ಕೆರೆ–ಕುಂಟೆಗಳ ಅತಿಕ್ರಮಣದಂತಹ ಪ್ರಕರಣಗಳತ್ತ ಆದ್ಯ ಗಮನ ಹರಿಸಿ ಜಿಲ್ಲಾಧಿಕಾರಿಗಳು ಸರ್ಕಾರ ಆಸ್ತಿ ರಕ್ಷಣೆಯತ್ತ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಲಹೆ ಮಾಡಿದರು.

**ಬಾಪೂಜಿ ಸೇವಾ ಕೇಂದ್ರ**

ರಾಜ್ಯದಲ್ಲಿ 6000 ಬಾಪೂಜಿ ಸೇವಾ ಕೇಂದ್ರ ನಿರ್ಮಿಸಲು ಗುರಿಗೆ ಪ್ರತಿಯಾಗಿ 5141 ಬಾಪೂಜಿ ಸೇವಾ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಒಂದು ನೂರಕ್ಕೂ ಹೆಚ್ಚು ಸೇವೆಗಳ ಒದಗಿಸುತ್ತಿರುವ ಈ ಕೇಂದ್ರಗಳು ಜನಸಾಮಾನ್ಯರಿಗೆ, ವಿಶೇಷವಾಗಿ ರೈತರಿಗೆ, ಉಪಯುಕ್ತವಾಗಿದೆ. ಉಳಿಕೆ 859 ಸೇವಾ ಕೇಂದ್ರಗಳನ್ನು ಮುಂದಿನ ಎರಡು ತಿಂಗಳೊಳಗೆ ಪ್ರಾರಂಭಿಸಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಿ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಮುಖ್ಯಮಂತ್ರಿ ನಿರ್ದೇಶನ ನೀಡಿದರು.

ಬೆಂಗಳೂರು ನಗರದಲ್ಲಿ ಒಂದು ಲಕ್ಷ ಮನೆ ನಿರ್ಮಿಸಲು ಗುರಿ ಇದೆ. ಜಿಲ್ಲಾ ಮಟ್ಟದಲ್ಲಿ ಒಟ್ಟಾರೆ ಆರು ಲಕ್ಷ ಮನೆಗಳನ್ನು ನಿರ್ಮಿಸಲು ಈ ವರ್ಷ ಗುರಿ ಹೊಂದಲಾಗಿದೆ. ಈ ಯೋಜನೆಯ ಅನುಷ್ಠಾನಕ್ಕೆ ನಿವೇಶನ ದೊರಕಿಸಿಕೊಡುವ ಜವಾಬ್ದಾರಿ ತಮ್ಮ ಮೇಲಿದೆ. ರಾಜ್ಯದಲ್ಲಿ 15 ಲಕ್ಷ ಮನೆಗಳನ್ನು ಐದು ವರ್ಷಗಳಲ್ಲಿ ನಿರ್ಮಿಸಲು ಗುರಿ ಹೊಂದಲಾಗಿತ್ತು. ಇದೀಗ 12 ಲಕ್ಷ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ. ಇನ್ನೂ ಮೂರು ಲಕ್ಷ ಮನೆಗಳನ್ನು ಈ ವರ್ಷಾಂತ್ಯದೊಳಗೆ ನಿರ್ಮಿಸಬೇಕಾಗಿದೆ. ಈ ಕಾರ್ಯಕ್ಕೆ ಮತ್ತಷ್ಟು ವೇಗ ದೊರೆಯಬೇಕಾಗಿದೆ ಎಂದು ಸಿದ್ದರಾಮಯ್ಯ ಅವರು ತಮ್ಮ ಇಂಗಿತ ವ್ಯಕ್ತಪಡಿಸಿದರು.

**ಮಾರ್ಚ್ ಒಳಗೆ ಇಡೀ ರಾಜ್ಯ ಬಯಲು ಬಹಿರ್ದೆಸೆ ಮುಕ್ತ**

ರಾಜ್ಯದಲ್ಲಿ 55 ಲಕ್ಷ ಗುರಿಗೆ ಪ್ರತಿಯಾಗಿ 32 ಲಕ್ಷ ಶೌಚಾಲಯ ನಿರ್ಮಾಣ ಆಗಿದೆ. ರಾಜ್ಯದ 176 ತಾಲ್ಲೂಕುಗಳ ಪೈಕಿ ಈವರೆಗೆ 76 ತಾಲ್ಲೂಕುಗಳು ಮಾತ್ರ ಬಯಲು ಬಹಿರ್ದಸೆ ಮುಕ್ತ ತಾಲ್ಲುಕುಗಳಾಗಿವೆ. ಮುಂದಿನ 2018 ರ ಮಾರ್ಚ್ ಒಳಗೆ ಇಡೀ ರಾಜ್ಯ ಬಯಲು ಬಹಿರ್ದಸೆ ಮುಕ್ತವಾಗಬೇಕು. ಈ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯ ನಿರ್ಮಾಣ ಮತ್ತಷ್ಟು ತ್ವರಿತವಾಗಿ ಆಗಬೇಕು ಎಂದು ಮುಖ್ಯಮಂತ್ರಿ ಅಪೇಕ್ಷಿಸಿದರು.

**ಮಾತೃ ಪೂರ್ಣ : ಮಲೆನಾಡು ಜಿಲ್ಲೆಗಳಲ್ಲಿ ವಿಶೇಷ ಕ್ರಮಕ್ಕೆ ಸೂಚನೆ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೀ ಮಾತೃ ಪೂರ್ಣ ಯೋಜನೆಯ ಅನುಷ್ಠಾನಕ್ಕೆ ಪರಮಾಧ್ಯತೆ ನೀಡಿ. ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಪೌಷ್ಠಿಕವಾದ ಆಹಾರ ಒದಗಿಸುವ ಈ ಯೋಜನೆಯ ಸಮರ್ಪಕ ಅನುಷ್ಠಾನ ಆಗಬೇಕು. ಮಲೆನಾಡು ಜಿಲ್ಲೆಗಳಲ್ಲಿ ಒಂದು ಮನೆ ಒಂದು ಪ್ರದೇಶದಲ್ಲಿದ್ದರೆ ಮತ್ತೊಂದು ಮನೆ ಮತ್ತೊಂದು ಪ್ರದೇಶದಲ್ಲಿದೆ. ಆದಕಾರಣ, ಯೋಜನೆಯ ಅನುಷ್ಠಾನದಲ್ಲಿ ಕೆಲವು ಸಮಸ್ಯೆಗಳು ಎದುರಾಗಿದೆ ಎಂಬ ಅಂಶ ಗಮನಕ್ಕೆ ಬಂದಿದೆ. ಆದಕಾರಣ, ಮಲೆನಾಡು ಜಿಲ್ಲೆಗಳಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ವಿಶೇಷ ಕ್ರಮ ಕೈಗೊಳ್ಳುವಂತೆ ಸಿದ್ದರಾಮಯ್ಯ ಸೂಚಿಸಿದರು.

**ಕಾಲ ಕಾಲಕ್ಕೆ ಸಭೆ ನಡೆಸಿ**

ಕರ್ನಾಟಕ ಅಭಿವೃದ್ಧಿ ಮಂಡಳಿಯ ಸಭೆ, ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಮೇಲಿನ ದೌರ್ಜನ್ಯ ತಡೆ ಕಾಯಿದೆ ಹಾಗೂ ಅಲ್ಪ ಸಂಖ್ಯಾತರ ಅಭಿವೃದ್ಧಿಗೆ ರೂಪಿಸಿರುವ 15–ಅಂಶಗಳ ಪ್ರಗತಿ ಪರಿಶೀಲನಾ ಸಭೆ ಎಲ್ಲವೂ ಕಾಲ ಕಾಲಕ್ಕೆ ನಡೆಸಿ, ಸರ್ಕಾರಕ್ಕೆ ವರದಿ ಸಲ್ಲಿಸಿ. ಹಠಾತ್ ಭೇಟಿ ನೀಡಿ ಪರಿಶೀಲಿಸಿ. ಕರ್ತವ್ಯ ಲೋಪ ಎಸಗಿದವರ ವಿರುದ್ಧ ಶಿಸ್ತು ಕ್ರಮ ಜರುಗಿಸಿ. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಕರೆ ನೀಡಿದರು.

**ಇಂದಿರಾ ಕ್ಯಾಂಟೀನ್ : ಸ್ಥಳ ಗುರುತಿಸಿ, ಇಲ್ಲವಾದಲ್ಲಿ ಮೊಬೈಲ್ ಕ್ಯಾಂಟೀನ್ ಪ್ರಾರಂಭಿಸಿ**

ಬೆಂಗಳೂರು ನಗರದಲ್ಲಿ ಪ್ರಾರಂಭಿಸಿರುವ ಇಂದಿರಾ ಕ್ಯಾಂಟೀನ್ ಮಾದರಿಯಲ್ಲಿಯೇ, ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿಯೂ, ಒಂದು ಲಕ್ಷಕ್ಕಿಂತಲೂ ಹೆಚ್ಚು ಜನಸಂಖ್ಯೆ ಇರುವ ನಗರ ಪಟ್ಟಣಗಳಲ್ಲಿ ಜನವರಿ 1 ರಿಂದ ಇಂದಿರಾ ಕ್ಯಾಂಟೀನ್‌ಗಳನ್ನು

ಪ್ರಾರಂಭಿಸಬೇಕು ಎಂಬುದು ಸರ್ಕಾರದ ಸದಾಶಯ. ಜನಸಂಖ್ಯೆ ಒಂದು ಲಕ್ಷ ಇಲ್ಲ. ಕೇವಲ 75,000 ಇದೆ ಎಂದು ಕೈಕಟ್ಟಿ ಕುಳಿತು ಕೊಳ್ಳಬೇಡಿ. ಅವಶ್ಯಕತೆ ಕಂಡು ಬಂದಲ್ಲಿ ಅಂತಹ ಪ್ರದೇಶದಲ್ಲೂ ಇಂದಿರಾ ಕ್ಯಾಂಟೀನ್ ಪ್ರಾರಂಭಿಸಲು ಮುಂದಾಗಿ. ಅದೇ ರೀತಿ ಒಂದು ಲಕ್ಷ ಜನಸಂಖ್ಯೆಯ ಬದಲು ಎರಡು ಲಕ್ಷ ಜನಸಂಖ್ಯೆ ಇದ್ದಲ್ಲಿ ನಿಯಮಾನುಸಾರ ಒಂದೇ ಕ್ಯಾಂಟೀನ್ ಎಂಬ ತತ್ವಕ್ಕೆ ಬದ್ಧರಾಗುವುದು ಬೇಡ. ಮತ್ತೊಂದು ಕ್ಯಾಂಟೀನ್ ಪ್ರಾರಂಭಿಸುವ ಔದಾರ್ಯ ತೋರಿ.

ಆಸ್ಪತ್ರೆಯ ಆವರಣ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಪ್ರಾಂಗಣ, ಬಸ್ ನಿಲ್ದಾಣ ಹೀಗೆ ಜನ ಸಂದಣಿ ಇರುವ ಪ್ರದೇಶದಲ್ಲಿ ಇಂದಿರಾ ಕ್ಯಾಂಟೀನ್ ತೆರೆಯಿರಿ. ಸ್ಥಳದ ಕೊರತೆ ಎದುರಾದಲ್ಲಿ ಬಾಡಿಗೆಗೆ ಪಡೆಯಿರಿ ಅಥವಾ ಮೊಬೈಲ್ ಕ್ಯಾಂಟೀನ್‌ಗೆ ಚಾಲನೆ ನೀಡಿ. ಶ್ರಮಿಕ ವರ್ಗಕ್ಕೆ ಅನ್ನ ಒದಗಿಸುವ ಈ ಕಾರ್ಯಕ್ಕೆ ಅತ್ಯಾಧ್ಯತೆ ನೀಡಿ ಎಂದು ಸಿದ್ದರಾಮಯ್ಯ ಅವರು ಸೂಚನೆ ನೀಡಿದರು.

ಮುಖ್ಯಮಂತ್ರಿಯವರ ಅನಿಲ ಭಾಗ್ಯ ಯೋಜನೆಯಡಿ 30 ಲಕ್ಷ ಕುಟುಂಬಗಳಿಗೆ ಸೌಲಭ್ಯ ಒದಗಿಸುವ ಗುರಿ ಇದೆ. ಇದನ್ನು ಈ ಕೂಡಲೇ ಕಾರ್ಯಗತಗೊಳಿಸಿ. ರಾಜ್ಯದಲ್ಲಿ ಬಡತನ ರೇಖೆಗಿಂತಲೂ ಕಡಿಮೆ ಇರುವ ಅರ್ಹ ಕುಟುಂಬಗಳಿಗೆ ಆಧ್ಯತೆಯ ಮೇರೆಗೆ ಕಾರ್ಡ್ ವಿತರಿಸಿ. ಮೈಸೂರು ಮತ್ತು ರಾಯಚೂರು ಜಿಲ್ಲೆಗಳಲ್ಲಿ ಶಾಲಾ ಮಕ್ಕಳಿಗೆ ಹಾಲು ನೀಡುವಲ್ಲಿ ಸುವಾಸಿತ ಹಾಲು ಒದಗಿಸುವ ಕಾರ್ಯ ಈಗಾಗಲೇ ಜಾರಿಯಾಗಿದೆ. ಇದರ ಯಶಸ್ಸು ಅಧ್ಯಯಿನಿಸಿ ತಿಳಿಸಿ ಎಂದು ಮುಖ್ಯಮಂತ್ರಿ ಹೇಳಿದರು.

## ರೈತರಿಂದಲೇ ಬೆಳೆ ಸಮೀಕ್ಷೆ !

ಬೆಳೆ ಸಮೀಕ್ಷಾ ಕಾರ್ಯವನ್ನು ನವೆಂಬರ್ 10 ರವರೆಗೆ ಅಧಿಕಾರಿಗಳು ಮಾಡಲಿ. ಬೆಳೆ ವಿಮೆ ಹಾಗೂ ಬೆಳೆ ಪರಿಹಾರಕ್ಕೆ ಅತ್ಯಾವಶ್ಯಕವೆನಿಸಿರುವ ತಮ್ಮ ಭೂಮಿಗೆ ಸಂಬಂಧಿತ ಮಾಹಿತಿಯನ್ನು ಬೆಳೆ ಸಮೀಕ್ಷಾ ಆ್ಯಪ್ ಮೂಲಕ ರೈತರೇ ದಾಖಲಿಸಲು ಪ್ರೇರೇಪಿಸಿ. ಈ ಕುರಿತು ರೈತರಲ್ಲಿ ಜಾಗೃತಿ ಮೂಡಿಸಿ ಎಂದು ಸಿದ್ದರಾಮಯ್ಯ ಅವರು ಸಲಹೆಯಿತ್ತರು.

ಕಂದಾಯ ಸಚಿವ ಕಾಗೋಡು ತಿಮ್ಮಪ್ಪ, ಲೋಕೋಪಯೋಗಿ ಸಚಿವ ಡಾ ಹೆಚ್. ಸಿ. ಮಹದೇವಪ್ಪ, ಗೃಹ ಸಚಿವ ರಾಮಲಿಂಗಾರೆಡ್ಡಿ, ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ

ಟಿ. ಬಿ. ಜಯಚಂದ್ರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್. ಕೆ. ಪಾಟೀಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ. ಆರ್. ರಮೇಶ್ ಕುಮಾರ್, ಇಂಧನ ಸಚಿವ ಡಿ. ಕೆ. ಶಿವಕುಮಾರ್, ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್ ರೋಷನ್ ಬೇಗ್, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಕೆ. ಜೆ. ಜಾರ್ಜ್, ಅರಣ್ಯ ಸಚಿವ ಬಿ. ರಮಾನಾಥ್ ರೈ, ಕೃಷಿ ಸಚಿವ ಕೃಷ್ಣಬೈರೇಗೌಡ, ಸಮಾಜ ಕಲ್ಯಾಣ ಸಚಿವ ಹೆಚ್ ಆಂಜನೇಯ, ವೈದ್ಯಕೀಯ ಶಿಕ್ಷಣ ಸಚಿವ ಡಾ ಶರಣ್ ಪ್ರಕಾಶ್ ಪಾಟೀಲ್, ಪಶು ಸಂಗೋಪನಾ ಸಚಿವ ಎ. ಮಂಜು, ಸಹಾಕಾರ ಸಚಿವ ರಮೇಶ್ ಜಾರಕಿ ಹೊಳಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವ ಪ್ರಿಯಾಂಕ್ ಖರ್ಗೆ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವ ತನ್ವೀರ್ ಸೇಠ್, ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಯು.ಟಿ ಖಾದರ್, ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಈಶ್ವರ್ ಖಂಡ್ರೆ, ಯುವ ಸಬಲೀಕರಣ, ಕ್ರೀಡಾ ಹಾಗೂ ಮೀನುಗಾರಿಕಾ ಸಚಿವ ಪ್ರಮೋದ್ ಮಧ್ವರಾಜ್, ಸಣ್ಣ ಕೈಗಾರಿಕಾ ರಾಜ್ಯ ಸಚಿವೆ ಗೀತಾ ಮಹದೇವ ಪ್ರಸಾದ್, ನವದೆಹಲಿಯಲ್ಲಿನ ರಾಜ್ಯ ಸರ್ಕಾರದ ವಿಶೇಷ ಪ್ರತಿನಿಧಿ ಅಪ್ಪಾಜಿ ಸಿ ಎಸ್ ನಾಡಗೌಡ, ಅಪರ ಪ್ರತಿನಿಧಿ ಸಲೀಂ ಅಹಮದ್ ಅವರೂ ಸೇರಿದಂತೆ ಹಲವು ಗಣ್ಯರು ಸಭೆಯಲ್ಲಿ ಪಾಲ್ಗೊಂಡಿದ್ದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್ ಚಂದ್ರ ಕುಂಟಿಆ, ವಿವಿಧ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಪ್ರಧಾನ ಕಾಯದರ್ಶಿಗಳು, ಸರ್ಕಾರದ ಕಾರ್ಯದರ್ಶಿಗಳು, ಪ್ರಾದೇಶಿಕ ಆಯುಕ್ತರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು, ಮಾಹಿತಿ ಒದಗಿಸಿದರು.

************

ಡಿ ಪಿ ಎಂ